ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ., ನ್ಯಾಯಾಲಯ,
ಉಡುಪಿ.

ಸಿ.ಸಿಃ 758/ 2024
ಚಾ. ಸಾ 05
ಪ್ರಾ.ಸಾ 04

| | | |
|---|---|---|
| ಸಾಕ್ಷಿದಾರರ ಹೆಸರು | : | ಚಂದ್ರಕಾಂತ್ |
| ತಂದೆಯ ಹೆಸರು | : | ಗುರುವ |
| ವಯಸ್ಸು | : | 49 |
| ಉದ್ಯೋಗ | : | ಕೂಲಿ |
| ವಾಸಸ್ಥಳ | : | ಮಲ್ಪೆ |

ದಿನಾಂಕಃ 17-03-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಹಿರಿಯ ಸಹಾಯಕ ಅಭಿಯೋಜಕರಿಂದಃ**

ನನಗೆ ಚಾಸಾ 1 ರಿಂದ 4 ರವರ ಪರಿಚಯ ಇಲ್ಲ . ಆರೋಪಿತರ ಪರಿಚಯ ಇಲ್ಲ . ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ . ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ .

ಮಾನ್ಯ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯವರನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕು ಎಂದು ಕೋರಿದ್ದು, ಅವರ ಮನವಿಯನ್ನು ಅಂಗೀಕರಿಸಿ ಅನುಮತಿ ನೀಡಲಾಗಿದೆ.

**ಪಾಟೀ ಸವಾಲುಃ ಹಿರಿಯ ಸಹಾಯಕ ಅಭಿಯೋಜಕರಿಂದಃ**

02-09-2018 ರಂದು ಬೆಳಿಗ್ಗೆ 8 ಗಂಟೆ ಸಮಾರಿಗೆ ನಾನು ಚಾಸಾ 1 ರವರ ಮನೆಯ ಬಳಿ ತಂತಿ ಬೇಲಿ ಹಾಕುತ್ತಿರುವಾಗ ಆರೋಪಿತರು ಚಾಸಾ 1 ರಿಂದ 4 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಜೀವ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ . ಮತ್ತು 1ನೇ ಆರೋಪಿ ಕೈಯಿಂದ ಕತ್ತಿ ಹಿಡಿದುಕೊಂಡು ಚಾಸಾ 1 ರವರ

ಮನೆಯವರಿಗೆ ಕೊಲೆ ಮಾಡುವುದಾಗಿ ಜೀವ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ . 03-09-2018 ರಂದು ಬೆಳಿಗ್ಗೆ 7 ಗಂಟೆಗೆ ಆರೋಪಿತರು ಚಾಸಾ 1 ರವರು ಜಾಗಕ್ಕೆ ಅಕ್ರಮ ಪ್ರವೇಶ ಮಾಡಿ ಕಂಭವನ್ನು ತುಂಡು ಮಾಡಿರುತಾರೆ ಎಂದರೆ ಸರಿಯಲ್ಲ . ನನಗೆ ಈ ವಿಚಾರವನ್ನು ಚಾಸಾ 1 ರವರು ತಿಳಿಸಿರುತ್ತಾರೆ ಎಂದರೆ ಸರಿಯಲ್ಲ . ನಾನು ಘಟನೆಯ ವಿಚಾರವಾಗಿ ದಿ 04-09-2018 ರಂದು ಪೊಲೀಸರು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ . ಸಾಕ್ಷಿಯ ಹೇಳಿಕೆಯ ಭಾಗವನ್ನು ನಿಪಿ 9 ಎಂದು ಗುರುತಿಸಲಾಯಿತು . ಪ್ರಕರಣದ ಸಂಪೂರ್ಣ ಮಾಹಿತಿ ಇದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಏನೂ ಇಲ್ಲ**

**ಮರು ವಿಚಾರಣೆಃ** ಇಲ್ಲ.

(ತೆರದ ನ್ಯಾಯಾಲಯದಲ್ಲಿ ಸಾಕ್ಷಿಯ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ ಎಂದು ಒಪ್ಪಿದರು.

ಪ್ರ.ಹಿ.ಸಿ.ನ್ಯಾ ಮತ್ತು ಸಿ.ಜೆ.ಎಂ
ಉಡುಪಿ.